PR

# ಕರ್ನಾಟಕ ಸರ್ಕಾರ

**ಸಂಖ್ಯೆ:** ಗ್ರಾಅಪ 324 ಗ್ರಾಪಂಅ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:16-05-2018.

## ಅಧಿಸೂಚನೆ

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 (1993ರ ಕರ್ನಾಟಕ ಅಧಿನಿಯಮ ಸಂಖ್ಯೆ 14)ರ ಪ್ರಕರಣ 2ರ (28ಸಿ) ಖಂಡ 58, 145, 146 ಮತ್ತು 184 ರೊಡನೆ ಓದಿಕೊಂಡಂತೆ 311 ರಲ್ಲಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಜವಾಬ್ದಾರಿ ನಕ್ಷೆಯ ವಿವರ, ವಿವರ, ಮೇಲ್ವಿಚಾರಣೆ) ನಿಯಮಗಳು, 2018ರ ಕರಡನ್ನು ಸದರಿ ಅಧಿನಿಯಮದ 311ನೇ ಪ್ರಕರಣದ ಮೂಲಕ ಅಗತ್ಯಪಡಿಸಲಾದಂತೆ, ಇದರಿಂದ ಬಾಧಿತರಾಗಬಹುದಾದ ಎಲ್ಲಾ ವ್ಯಕ್ತಿಗಳ ಮಾಹಿತಿಗಾಗಿ ಈ ಮೂಲಕ ಪ್ರಕಟಿಸಲಾಗಿದೆ ಮತ್ತು ಸದರಿ ಕರಡನ್ನು, ಸರ್ಕಾರಿ ರಾಜ್ಯ ಪತ್ರದಲ್ಲಿ ಪ್ರಕಟಿಸಿದ ದಿನಾಂಕದಿಂದ ಹದಿನೈದು ದಿನಗಳ ನಂತರ ಪರಿಗಣನೆಗೆ ತೆಗೆದುಕೊಳ್ಳಲಾಗುತ್ತದೆಂದೂ ಈ ಮೂಲಕ ಸೂಚನೆಯನ್ನು ನೀಡಲಾಗಿದೆ.

ಮೇಲೆ ನಿರ್ದಿಷ್ಟಪಡಿಸಿದ ಅವಧಿಯು ಮುಕ್ತಾಯವಾಗುವ ಮೊದಲು ಸದರಿ ಕರಡಿಗೆ ಸಂಬಂಧಿಸಿದಂತೆ ಯಾವೊಬ್ಬ ವ್ಯಕ್ತಿಯಿಂದ ರಾಜ್ಯ ಸರ್ಕಾರವು ಸ್ವೀಕರಿಸಬಹುದಾದ ಯಾವುದೇ ಆಕ್ಷೇಪಣೆ ಅಥವಾ ಸಲಹೆಯನ್ನು, ರಾಜ್ಯ ಸರ್ಕಾರವು ಪರಿಗಣಿಸುವುದು. ಆಕ್ಷೇಪಣೆ ಮತ್ತು ಸಲಹೆಗಳನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲ್ಲಾಖೆ, ಬಹುಮಹಡಿಗಳ ಕಟ್ಟಡ, ಡಾ॥ ಅಂಬೇಡ್ಕರ್ ವೀದಿ, ಬೆಂಗಳೂರು-01 ಇವರಿಗೆ ಮೇಲ್ಕಂಡ ಅವಧಿಯೊಳಗೆ ಕಳುಹಿಸಲು ಕೋರಲಾಗಿದೆ.

## ಕರಡು ನಿಯಮಗಳು

1. **ಹೆಸರು ಮತ್ತು ಪ್ರಾರಂಭ.-** (1) ಈ ನಿಯಮಗಳನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಜವಾಬ್ದಾರಿ ನಕ್ಷೆಯ ವಿವರ, ಮೇಲ್ವಿಚಾರಣೆ) ನಿಯಮಗಳು, 2018 ಎಂದು ಕರೆಯತಕ್ಕದ್ದು.

    (2) ಈ ನಿಯಮಗಳು ಕರ್ನಾಟಕ ರಾಜ್ಯ ಪತ್ರದಲ್ಲಿ ಅಂತಿಮವಾಗಿ ಪ್ರಕಟಿತವಾದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

2. **ಪರಿಭಾಷೆಗಳು.-** ಈ ನಿಯಮಗಳಲ್ಲಿ ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು.-

    (ಎ) **"ಅಧಿನಿಯಮ"** ಎಂದರೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 (1993 ರ ಕರ್ನಾಟಕ ಅಧಿನಿಯಮ ಸಂಖ್ಯೆ: 14)

    (ಬಿ) **"ಪಂಚಾಯತ್ ರಾಜ್ ಸಂಸ್ಥೆಗಳು ನಿರ್ವಹಿಸಬೇಕಾದ ಪ್ರಕಾರ್ಯಗಳು"** ಎಂದರೆ ಅಧಿನಿಯಮದಲ್ಲಿ ಪ್ರಕರಣ 58, 145, 146 ಮತ್ತು 184 ರಡಿಯಲ್ಲಿ ಅನುಕ್ರಮವಾಗಿ ಗ್ರಾಮ ಪಂಚಾಯತಿಗಳಿಗೆ, ತಾಲ್ಲೂಕು ಪಂಚಾಯತಿಗಳಿಗೆ ಮತ್ತು ಜಿಲ್ಲಾ ಪಂಚಾಯತಿಗಳಿಗೆ ಅಧಿಕಾರ ವಿಕೇಂದ್ರಿಕರಣ ನೀತಿಯನ್ವಯ ನಿಗಧಿಪಡಿಸಲಾದ ಪ್ರಕಾರ್ಯಗಳು.

(ಸಿ) ಪ್ರಕರಣ ಎಂದರೆ, ಅಧಿನಿಯಮದ ಪ್ರಕರಣ:

(ಡಿ) **"ಅನುದಾನ"** ಎಂದರೆ ಅನುಸೂಚಿ-I, ಅನುಸೂಚಿ-II ಮತ್ತು ಅನುಸೂಚಿ-III ರಡಿ ನಿರ್ದಿಷ್ಟಪಡಿಸಿರುವ ಪ್ರಕಾರ್ಯಗಳಿಗೆ ಸಂಬಂಧಿಸಿದಂತೆ ಸರ್ಕಾರವು ಆಯಾ ಇಲಾಖೆಗೆ ಆ ಇಲಾಖೆಯ ಲೆಕ್ಕಶೀರ್ಷಿಕೆಯಡಿ ನಿಗಧಿಗೊಳಿಸಿರುವ ಅನುದಾನ ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳು ಕ್ರೋಢೀಕರಿಸಿದ ಸಂಪನ್ಮೂಲದ ಅನುದಾನ.

3. **ಗ್ರಾಮ ಪಂಚಾಯತಿಯ ಜವಾಬ್ದಾರಿ ನಕ್ಷೆಯ ವಿವರ.-** ರಾಜ್ಯದಲ್ಲಿಯ ಪ್ರತಿಯೊಂದು ಗ್ರಾಮ ಪಂಚಾಯತಿಯು ಅಧಿನಿಯಮದ ಅನುಸೂಚಿ-I ರಲ್ಲಿ ನಿರ್ದಿಷ್ಟಪಡಿಸಲಾದ ಜವಾಬ್ದಾರಿಗಳ ಜೊತೆ ಈ ನಿಯಮಗಳ ಅನುಬಂಧ-1 ರಲ್ಲಿ ನಮೂದಿಸಲಾದ ಕಡ್ಡಾಯ ಕರ್ತವ್ಯಗಳು ಮತ್ತು ಕಾರ್ಯಚಟುವಟಿಕೆಗಳ ಜವಾಬ್ದಾರಿ ನಕ್ಷೆ ವಿವರಗಳನ್ನೊಳಗೊಂಡಿರತಕ್ಕದ್ದು.

4. **ತಾಲ್ಲೂಕು ಪಂಚಾಯತಿಯ ಜವಾಬ್ದಾರಿ ನಕ್ಷೆಯ ವಿವರ.-** ರಾಜ್ಯದಲ್ಲಿಯ ಪ್ರತಿಯೊಂದು ತಾಲ್ಲೂಕು ಪಂಚಾಯತಿಯು ಅಧಿನಿಯಮದ ಅನುಸೂಚಿ-II ರಲ್ಲಿ ನಿರ್ದಿಷ್ಟಪಡಿಸಲಾದ ಜವಾಬ್ದಾರಿಗಳ ಜೊತೆ ಈ ನಿಯಮಗಳ ಅನುಬಂಧ-IIರಲ್ಲಿ ನಮೂದಿಸಲಾದ ಕಡ್ಡಾಯ ಕರ್ತವ್ಯಗಳು ಮತ್ತು ಕಾರ್ಯಚಟುವಟಿಕೆಗಳ ನಕಾಶೆಯ ವಿವರಗಳನ್ನೊಳಗೊಂಡಿರತಕ್ಕದ್ದು.

5. **ಜಿಲ್ಲಾ ಪಂಚಾಯುತಿಯ ಜವಾಬ್ದಾರಿ ನಕ್ಷೆಯ ವಿವರ,-** ರಾಜ್ಯದಲ್ಲಿಯ ಪ್ರತಿಯೊಂದು ಜಿಲ್ಲಾ ಪಂಚಾಯತಿಯು ಅಧಿನಿಯಮದ ಅನುಸೂಚಿ-III ರಲ್ಲಿ ನಿರ್ದಿಷ್ಟಪಡಿಸಲಾದ ಜವಾಬ್ದಾರಿಗಳ ಜೊತೆ ಈ ನಿಯಮಗಳ ಅನುಬಂಧ-IIIರಲ್ಲಿ ನಮೂದಿಸಲಾದ ಕಡ್ಡಾಯ ಕರ್ತವ್ಯಗಳು ಮತ್ತು ಕಾರ್ಯಚಟುವಟಿಕೆಗಳ ನಕಾಶೆಯ ವಿವರಗಳನ್ನೊಳಗೊಂಡಿರತಕ್ಕದ್ದು.

6. **ಕಾರ್ಯವಿಧಾನ.-** ಅಧಿನಿಯಮದ, ಅನುಸೂಚಿ-I, ಅನುಸೂಚಿ-II ಮತ್ತು ಅನುಸೂಚಿ-III ಹಾಗೂ ಇನ್ನಿತರೆ ಪ್ರಕರಣಗಳಡಿ ಗ್ರಾಮೀಣಾಭಿವೃದ್ಧಿಗಾಗಿ ವಹಿಸಿರುವ ಪ್ರಕಾರ್ಯಗಳಿಗೆ ಸಂಬಂಧಪಡುವ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಒದಗಿಸಲಾಗುವ ಹಣಕಾಸು, ಅಥವಾ ಯಾವುದೇ ನೆರವಿಗೆ ಸಂಬಂಧಿಸಿದಂತೆ ಯೋಜನೆಗಳನ್ನು ಸಿದ್ಧಪಡಿಸಲು ಮತ್ತು ಅನುಷ್ಠಾನಗೊಳಿಸಲು ಪಂಚಾಯತ್ ರಾಜ್ ಸಂಸ್ಥೆಗಳು ಜವಾಬ್ದಾರಿ ಹೊಂದಿರತಕ್ಕದ್ದು. ಈ ಕಾರ್ಯಕ್ರಮಗಳಿಗೆ ಮತ್ತು ಯೋಜನೆಗಳಿಗೆ ಸಂಬಂಧಿಸಿದ ಆಯಾಯ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಪಂಚಾಯತ್ ರಾಜ್ ಸಂಸ್ಥೆಗಳಿಗೆ ಸಹಕಾರ ನೀಡತಕ್ಕದ್ದು. ಈ ಕಾರ್ಯಚಟುವಟಿಕೆಗಳನ್ನು ಜಿಲ್ಲಾ ವಲಯ, ತಾಲ್ಲೂಕು ವಲಯ ಹಾಗೂ ಗ್ರಾಮ ಪಂಚಾಯತಿ ವಲಯದಲ್ಲಿ ಪ್ರತ್ಯೇಕವಾಗಿ ಸರ್ಕಾರವು ಗುರುತಿಸಿ ಅನುದಾನಗಳನ್ನು ಪ್ರತ್ಯೇಕ ಲೆಕ್ಕ ಶೀರ್ಷಿಕೆಯಡಿ ಲಭ್ಯವಾಗುವಂತೆ ಮಾಡತಕ್ಕದ್ದು.

7. **ತಾಂತ್ರಿಕ ಮೇಲ್ವಿಚಾರಣೆ.-** ಸರ್ಕಾರವು ನಿಗಧಿಪಡಿಸಿದ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳ ಅನುಷ್ಠಾನದ ಜವಾಬ್ದಾರಿಗಳನ್ನು ಪಂಚಾಯತ್ ರಾಜ್ ಸಂಸ್ಥೆಗಳು ನಿರ್ವಹಿಸತಕ್ಕದ್ದು. ಪರಿಣಾಮಕಾರಿ ಅನುಷ್ಠಾನಕ್ಕಾಗಿ ಅಗತ್ಯವಿರುವ ತಾಂತ್ರಿಕ ಮತ್ತು ಆಡಳಿತಾತ್ಮಕ ಮಾರ್ಗದರ್ಶನ ನೀಡುವುದು ಸಂಬಂಧಪಟ್ಟ ಇಲಾಖೆಯ ಜವಾಬ್ದಾರಿ ಆಗಿರತಕ್ಕದ್ದು. ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರು ಮತ್ತು ವಿಭಾಗೀಯ ಮಟ್ಟದ ಇಲಾಖಾ ಅಧಿಕಾರಿಗಳು ಆಯಾ ಯೋಜನೆಗಳು ಅಥವಾ ಆದೇಶಗಳಲ್ಲಿ ಒಳಗೊಂಡಿರುವ ತಾಂತ್ರಿಕ ಮತ್ತು ಹಣಕಾಸಿನ ಲಭ್ಯತೆಗನುಸಾರ ಪರಿವೀಕ್ಷಣಾ ಅಧಿಕಾರಿಗಳಾಗಿ ಕಾಮಗಾರಿಗಳ ಅನುಷ್ಠಾನದ ಗುಣಮಟ್ಟದ ಬಗ್ಗೆ ಖಚಿತಪಡಿಸಿಕೊಳ್ಳಬೇಕು. ಪರಿವೀಕ್ಷಣೆಯ ಸಮಯದಲ್ಲಿ ಗಮನಿಸಿದ ನ್ಯೂನತೆಗಳ ಬಗ್ಗೆ ವರದಿಯನ್ನು ಸಂಬಂಧಪಟ್ಟ ಅನುಷ್ಠಾನಗೊಳಿಸುವ ಪಂಚಾಯತ್ ರಾಜ್ ಸಂಸ್ಥೆಗೆ ಒಂದು ವಾರದೊಳಗಾಗಿ ಕಳುಹಿಸತಕ್ಕದ್ದು. ಈ ವರದಿಯನ್ನು ಪಡೆದುಕೊಂಡ 15 ದಿನದೊಳಗೆ ಅಂಥಾ ಪಂಚಾಯತ್ ರಾಜ್ ಸಂಸ್ಥೆಯು ಅನುಸರಣಾ ಕ್ರಮವನ್ನು ಕೈಗೊಳ್ಳಬೇಕು. ಈ ರೀತಿ ಕ್ರಮ ಕೈಗೊಳ್ಳಲು ವಿಫಲವಾದಲ್ಲಿ ಸಂಬಂಧಪಟ್ಟ ಪಂಚಾಯತ್ ರಾಜ್ ಸಂಸ್ಥೆಯು ಕರ್ತವ್ಯ ನಿರ್ವಹಣೆಯಲ್ಲಿ ಲೋಪವೆಸಗಿದೆ ಎಂದು ಪರಿಗಣಿಸತಕ್ಕದ್ದು ಮತ್ತು ಸರ್ಕಾರವು ಸೂಕ್ತ ಕ್ರಮವನ್ನು ಅಂಥ ಸಂಸ್ಥೆಯ ವಿರುದ್ಧ ತೆಗೆದುಕೊಳ್ಳತಕ್ಕದ್ದು.

8. **ಆಡಳಿತಾತ್ಮಕ ಮೇಲ್ವಿಚಾರಣೆ.–** ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರು, ವಿಭಾಗ, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಕಾಲಕಾಲಕ್ಕೆ ಭೇಟಿ ನೀಡಿ ಮೇಲ್ವಿಚಾರಣೆ / ಪರಿಶೀಲನೆ ಮಾಡತಕ್ಕದ್ದು. ಪರಿಶೀಲನೆ ವೇಳೆ ಸಂಬಂಧಪಟ್ಟ ಅಧಿಕಾರಿಗಳು ಸ್ಥಳೀಯ ಅಧಿಕಾರಿಗಳೊಡನೆ ಇಲಾಖಾ ಕಾರ್ಯಕ್ರಮಗಳ ಅನುಷ್ಠಾನದ ಬಗ್ಗೆ ವಿಚಾರ ವಿನಿಮಯ ಮಾಡಿ ಸೂಕ್ತ ಸಲಹೆ / ಮಾರ್ಗದರ್ಶನ ನೀಡತಕ್ಕದ್ದು.

9. **ನಮ್ಮ ಗ್ರಾಮ, ನಮ್ಮ ಯೋಜನೆಯಡಿ ಗುರುತಿಸಲಾದ ಅಭಿವೃದ್ಧಿ ಕಾರ್ಯಕ್ರಮಗಳ ಯೋಜನೆ ತಯಾರಿಕೆ.–** ಗ್ರಾಮ/ ತಾಲ್ಲೂಕು/ ಜಿಲ್ಲಾ ಪಂಚಾಯತಿಗಳು ಹಾಗೂ ಇತರೆ ಸಂಬಂಧಪಟ್ಟ ಇಲಾಖೆಗಳು ಪ್ರಕರಣ 309 ಎ ರಿಂದ 309 ಹೆಚ್ ವರೆಗೆ ನಿರ್ದಿಷ್ಟಪಡಿಸಿದಂತೆ ನಮ್ಮ ಗ್ರಾಮ, ನಮ್ಮ ಯೋಜನೆಯಡಿ ಗುರುತಿಸಲಾಗುವ ಕಾರ್ಯಕ್ರಮಗಳ ಗುಚ್ಛದಿಂದ ಆಯ್ಕೆ ಮಾಡಿಕೊಳ್ಳತಕ್ಕದ್ದು. ನಂತರ ಆದ್ಯತೆಯ ಮೇರೆಗೆ ಯೋಜನೆಗಳನ್ನು ರೂಪಿಸಿ ತಾಲ್ಲೂಕು ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಹಾಗೂ ಜಿಲ್ಲಾ ಯೋಜನೆ ಸಮಿತಿ ಮತ್ತು ರಾಜ್ಯ ವಿಕೇಂದ್ರೀಕರಣ ಮತ್ತು ಅಭಿವೃದ್ಧಿ ಸಮಿತಿಗೆ ಕಳುಹಿಸತಕ್ಕದ್ದು. ಈ ರೀತಿ ಕೈಗೊಂಡ ಅಭಿವೃದ್ಧಿ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಆಯಾ ಲೆಕ್ಕಶೀರ್ಷಿಕೆಗಳಡಿ ಲಭ್ಯವಿರುವ ಅನುದಾನಕ್ಕನುಗುಣವಾಗಿ ಕ್ರಮ ಕೈಗೊಳ್ಳತಕ್ಕದ್ದು.

## ಅನುಬಂಧ–I

## ಗ್ರಾಮ ಪಂಚಾಯತಿ

### 1. ಗ್ರಾಮ ಪಂಚಾಯತಿಯ ಕಡ್ಡಾಯ ಕರ್ತವ್ಯಗಳು,–

ಅಧಿನಿಯಮದ ಅನುಸೂಚಿ–I ರಲ್ಲಿನ ವಿಷಯಗಳನ್ನು ಒಳಗೊಂಡಂತೆ, ಗ್ರಾಮ ಪಂಚಾಯತಿಯ ವಶದಲ್ಲಿರುವ ಗ್ರಾಮ ಪಂಚಾಯತಿ ನಿಧಿಯು ಅನುಮತಿಸುವಷ್ಟರ ಮಟ್ಟಿಗೆ ಗ್ರಾಮ ಪಂಚಾಯತಿಯು ಈ ಕೆಳಗಿನ ಜವಾಬ್ದಾರಿಗಳನ್ನು ಕಡ್ಡಾಯವಾಗಿ ನಿರ್ವಹಿಸತಕ್ಕದ್ದು.

1) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಸ್ತಾವನೆಯಲ್ಲಿ ತಿಳಿಸಲಾದ ಧ್ಯೇಯಗಳನ್ನು ಈಡೇರಿಸಲು ಅಗತ್ಯ ಕ್ರಮ ಕೈಗೊಳ್ಳುವುದು.
2) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 2ಎ ನಲ್ಲಿ ನಿರ್ದಿಷ್ಟಪಡಿಸಲಾದ ಪಂಚಾಯತಿ ನೀತಿ ನಿರ್ದೇಶಕ ತತ್ವಗಳ ಅನುಷ್ಠಾನಕ್ಕಾಗಿ ಶ್ರಮಿಸುವುದು.
3) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 3ಎ ನಿಂದ 3 ಹೆಚ್ವ ವರೆಗೆ ನಿರ್ದಿಷ್ಟಪಡಿಸಲಾದ ಗ್ರಾಮ ಸಭೆಯ ಮೂಲ ತತ್ವಗಳನ್ನು ತಪ್ಪದೆ ಪಾಲಿಸುವುದು.
4) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 199, 199ಎ ಮತ್ತು 200 ರಲ್ಲಿ ಅವಕಾಶ ಕಲ್ಪಿಸಿದಂತೆ ಗ್ರಾಮ ಪಂಚಾಯತಿಯ ಸಂಪನ್ಮೂಲ ಕ್ರೋಢೀಕರಣ ಮಾಡಿಕೊಳ್ಳುವುದರ ಜೊತೆಗೆ ಸರ್ಕಾರದ ವತಿಯಿಂದ ವಿವಿಧ ಲೆಕ್ಕ ಶೀರ್ಷಿಕೆಗಳಲ್ಲಿ ಲಭ್ಯವಾಗುವ ಅನುದಾನಗಳನ್ನು ಬಳಸಿಕೊಂಡು ಈ ಕೆಳಕಂಡ ಕರ್ತವ್ಯಗಳನ್ನು ನಿರ್ವಹಿಸುವುದು.

1. ಗ್ರಾಮ ಪಂಚಾಯತಿ ಪ್ರದೇಶದಲ್ಲಿ ಸಮರ್ಪಕ ಶುದ್ಧ ಕುಡಿಯುವ ನೀರು ಒದಗಿಸಲು ಅವಶ್ಯ ಕ್ರಮ ಕೈಗೊಳ್ಳುವುದು.
2. ಗ್ರಾಮ ಪಂಚಾಯತಿ ವ್ಯಾಪ್ತಿಯ ಎಲ್ಲಾ ಕುಟುಂಬಗಳಿಗೂ ವೈಯಕ್ತಿಕ / ಸಾಮೂಹಿಕ ಶೌಚಾಲಯ ಒದಗಿಸುವುದರ ಜೊತೆಗೆ ಶೌಚಾಲಯ ಬಳಸುವ ಪ್ರವೃತ್ತಿಯನ್ನು ಜನರಲ್ಲಿ ಮೂಡಿಸುವುದು.
3. ಗ್ರಾಮ ಪಂಚಾಯತಿ ಪ್ರದೇಶದಲ್ಲಿ ಘನ, ದ್ರವ, ತ್ಯಾಜ್ಯ ವಿಲೇವಾರಿ, ಸಂಸ್ಕರಿಸಲು ಹಾಗೂ ಸಂಪನ್ಮೂಲವಾಗಿ ಪರಿವರ್ತಿಸಲು ಎಲ್ಲಾ ಅವಶ್ಯ ಕ್ರಮ ಕೈಗೊಳ್ಳುವುದು.

4. ಗ್ರಾಮ ಪಂಚಾಯತಿ ಪ್ರದೇಶದಲ್ಲಿನ ಸಾರ್ವಜನಿಕ ರಸ್ತೆ ಮತ್ತು ಸ್ಥಳಗಳ ಅನಧಿಕೃತ ಒತ್ತುವರಿ ತಡೆಗಟ್ಟಲು ಹಾಗೂ ಪಂಚಾಯತಿ ಆಸ್ತಿಗಳನ್ನು ಸಂರಕ್ಷಿಸಲು ಎಲ್ಲಾ ಅವಶ್ಯ ಕ್ರಮ ಕೈಗೊಳ್ಳುವುದು.
5. ಗ್ರಾಮ ಪಂಚಾಯತಿ ವ್ಯಾಪ್ತಿಯ ಆಸ್ತಿಗಳ ಅನಧಿಕೃತ ವಹಿವಾಟುಗಳನ್ನು ತಡೆಗಟ್ಟಲು ಹಾಗೂ ಯೋಜಿತ ರೀತಿಯಲ್ಲಿ ಗ್ರಾಮಗಳ ಬೆಳವಣಿಗೆಗೆ ಇ-ಸ್ವತ್ತು ತಂತ್ರಾಂಶವನ್ನು ಸಮರ್ಪಕವಾಗಿ ಜಾರಿಗೊಳಿಸುವುದು.
6. ಗ್ರಾಮ ಪಂಚಾಯತಿ ವ್ಯಾಪ್ತಿಯ ನಾಗರೀಕರಿಗೆ ಅವಶ್ಯವಿರುವ ಸೇವೆಗಳನ್ನು ಸಕಾಲದಲ್ಲಿ ಬಾಪೂಜಿ ಸೇವಾ ಕೇಂದ್ರಗಳ ಮೂಲಕ ಸಮರ್ಪಕವಾಗಿ ಒದಗಿಸಲು ಎಲ್ಲಾ ಅವಶ್ಯ ಕ್ರಮಗಳನ್ನು ಕೈಗೊಳ್ಳುವುದು.
7. ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕಾಮಗಾರಿಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶವನ್ನು ಬಳಸುವುದರ ಮೂಲಕ ಪಾರದರ್ಶಕವಾಗಿ ಉತ್ತಮ ಗುಣಮಟ್ಟದಿಂದ ಅನುಷ್ಠಾನಗೊಳಿಸುವುದು.
8. ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಪರಿಸರ ಸಂರಕ್ಷಣೆ ಹಾಗೂ ಜೈವಿಕ ವೈವಿಧ್ಯತೆ ಕಾಪಾಡಲು ಎಲ್ಲಾ ಅವಶ್ಯ ಕ್ರಮಗಳನ್ನು ಕೈಗೊಳ್ಳುವುದು.
9. ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ನವೀಕರಿಸಬಹುದಾದ ಇಂಧನ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಎಲ್ಲಾ ಅವಶ್ಯ ಕ್ರಮಗಳನ್ನು ಕೈಗೊಳ್ಳುವುದು.
10. ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಉದ್ಯೋಗ ಸೃಜನೆ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಎಲ್ಲಾ ಅವಶ್ಯ ಕ್ರಮಗಳನ್ನು ಕೈಗೊಳ್ಳುವುದು.
11. ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸಹಕಾರ ಸಂಘಗಳ ಬಲವರ್ಧನೆಗೆ ಎಲ್ಲಾ ಅವಶ್ಯ ಕ್ರಮಗಳನ್ನು ಕೈಗೊಳ್ಳುವುದು.

## ಅನುಬಂಧ-II

## ತಾಲ್ಲೂಕು ಪಂಚಾಯತಿ

**1. ತಾಲ್ಲೂಕು ಪಂಚಾಯತಿಯ ಕಡ್ಡಾಯ ಕರ್ತವ್ಯಗಳು;-**

ಅಧಿನಿಯಮದ ಅನುಸೂಚಿ-II ರಲ್ಲಿನ ವಿಷಯಗಳನ್ನು ಒಳಗೊಂಡಂತೆ, ತಾಲ್ಲೂಕು ಪಂಚಾಯತಿಯ ವಶದಲ್ಲಿರುವ ತಾಲ್ಲೂಕು ಪಂಚಾಯತಿ ನಿಧಿಯು ಅನುಮತಿಸುವಷ್ಟರ ಮಟ್ಟಿಗೆ ತಾಲ್ಲೂಕು ಪಂಚಾಯತಿಯು ಈ ಕೆಳಗಿನ ಜವಾಬ್ದಾರಿಗಳನ್ನು ಕಡ್ಡಾಯವಾಗಿ ನಿರ್ವಹಿಸತಕ್ಕದ್ದು.

1) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಸ್ತಾವನೆಯಲ್ಲಿ ತಿಳಿಸಲಾದ ಧ್ಯೇಯಗಳನ್ನು ಈಡೇರಿಸಲು ಅಗತ್ಯ ಕ್ರಮ ಕೈಗೊಳ್ಳುವುದು.
2) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 2ಎ ನಲ್ಲಿ ನಿರ್ದಿಷ್ಟಪಡಿಸಲಾದ ಪಂಚಾಯತಿ ನೀತಿ ನಿರ್ದೇಶಕ ತತ್ವಗಳ ಅನುಷ್ಠಾನಕ್ಕಾಗಿ ಶ್ರಮಿಸುವುದು.
3) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 3ಎ ನಿಂದ 3 ಹೆಚ್ ವರೆಗೆ ನಿರ್ದಿಷ್ಟಪಡಿಸಲಾದ ಗ್ರಾಮ ಸಭೆಯ ಮೂಲ ತತ್ವಗಳನ್ನು ತಪ್ಪದೆ ಪಾಲಿಸಲು ಗ್ರಾಮ ಪಂಚಾಯತಿಗೆ ನೆರವಾಗುವುದು.
4) ತಾಲ್ಲೂಕು ಪಂಚಾಯತಿಗೆ ಸರ್ಕಾರದ ವತಿಯಿಂದ ವಿವಿಧ ಲೆಕ್ಕ ಶೀರ್ಷಿಕೆಗಳಲ್ಲಿ ಲಭ್ಯವಾಗುವ ಅನುದಾನಗಳನ್ನು ಬಳಸಿಕೊಂಡು ಈ ಕೆಳಕಂಡ ಕರ್ತವ್ಯಗಳನ್ನು ನಿರ್ವಹಿಸುವುದು.

1. ಗ್ರಾಮ ಪಂಚಾಯತಿ ಪ್ರದೇಶದಲ್ಲಿ ಸಮರ್ಪಕ ಶುದ್ಧ ಕುಡಿಯುವ ನೀರು ಒದಗಿಸಲು ಅವಶ್ಯ ಕ್ರಮ ಕೈಗೊಳ್ಳಲು ಗ್ರಾಮ ಪಂಚಾಯತಿಗಳಿಗೆ ನೆರವಾಗುವುದು.

2. ಗ್ರಾಮ ಪಂಚಾಯತಿ ವ್ಯಾಪ್ತಿಯ ಎಲ್ಲಾ ಕುಟುಂಬಗಳಿಗೂ ವೈಯಕ್ತಿಕ / ಸಾಮೂಹಿಕ ಶೌಚಾಲಯ ಒದಗಿಸುವುದರ ಜೊತೆಗೆ ಶೌಚಾಲಯ ಬಳಸುವ ಪ್ರವೃತ್ತಿಯನ್ನು ಜನರಲ್ಲಿ ಮೂಡಿಸಲು ಗ್ರಾಮ ಪಂಚಾಯತಿಗಳಿಗೆ ನೆರವಾಗುವುದು.
3. ಗ್ರಾಮ ಪಂಚಾಯತಿ ಪ್ರದೇಶದಲ್ಲಿ ಘನ, ದ್ರವ, ತ್ಯಾಜ್ಯ ವಿಲೇವಾರಿ, ಸಂಸ್ಕರಿಸಲು ಹಾಗೂ ಸಂಪನ್ಮೂಲವಾಗಿ ಪರಿವರ್ತಿಸಲು ಎಲ್ಲಾ ಅವಶ್ಯ ಕ್ರಮ ಕೈಗೊಳ್ಳಲು ಗ್ರಾಮ ಪಂಚಾಯತಿಗಳಿಗೆ ನೆರವಾಗುವುದು.
4. ಗ್ರಾಮ ಪಂಚಾಯತಿ ಪ್ರದೇಶದಲ್ಲಿನ ಸಾರ್ವಜನಿಕ ರಸ್ತೆ ಮತ್ತು ಸ್ಥಳಗಳ ಅನಧಿಕೃತ ಒತ್ತುವರಿ ತಡೆಗಟ್ಟಲು ಹಾಗೂ ಪಂಚಾಯತಿ ಮತ್ತು ಸಮುದಾಯದ ಆಸ್ತಿಗಳನ್ನು ಸಂರಕ್ಷಿಸಲು ಎಲ್ಲಾ ಅವಶ್ಯ ಕ್ರಮ ಕೈಗೊಳ್ಳಲು ಗ್ರಾಮ ಪಂಚಾಯತಿಗಳಿಗೆ ನೆರವಾಗುವುದು ಹಾಗೂ ತಾಲ್ಲೂಕು ಪಂಚಾಯತಿ ತನ್ನ ವ್ಯಾಪ್ತಿಯಲ್ಲಿನ ಆಸ್ತಿಗಳನ್ನು ಸಂರಕ್ಷಿಸಲು ಎಲ್ಲಾ ಅವಶ್ಯ ಕ್ರಮ ಕೈಗೊಳ್ಳುವುದು.
5. ಗ್ರಾಮ ಪಂಚಾಯತಿ ವ್ಯಾಪ್ತಿಯ ಆಸ್ತಿಗಳ ಅನಧಿಕೃತ ವಹಿವಾಟುಗಳನ್ನು ತಡೆಗಟ್ಟಲು ಹಾಗೂ ಯೋಜಿತ ರೀತಿಯಲ್ಲಿ ಗ್ರಾಮಗಳ ಬೆಳವಣಿಗೆಗೆ ಇ-ಸ್ವತ್ತು ತಂತ್ರಾಂಶವನ್ನು ಸಮರ್ಪಕವಾಗಿ ಜಾರಿಗೊಳಿಸಲು ಗ್ರಾಮ ಪಂಚಾಯತಿಗಳಿಗೆ ನೆರವಾಗುವುದು.
6. ಗ್ರಾಮ ಪಂಚಾಯತಿ ವ್ಯಾಪ್ತಿಯ ನಾಗರೀಕರಿಗೆ ಅವಶ್ಯವಿರುವ ಸೇವೆಗಳನ್ನು ಸಕಾಲದಲ್ಲಿ ಬಾಪೂಜಿ ಸೇವಾ ಕೇಂದ್ರಗಳ ಮೂಲಕ ಸಮರ್ಪಕವಾಗಿ ಒದಗಿಸಲು ಎಲ್ಲಾ ಅವಶ್ಯ ಕ್ರಮಗಳನ್ನು ಕೈಗೊಳ್ಳಲು ಗ್ರಾಮ ಪಂಚಾಯತಿಗಳಿಗೆ ನೆರವಾಗುವುದು.
7. ತಾಲ್ಲೂಕು ಪಂಚಾಯತಿ ವ್ಯಾಪ್ತಿಯಲ್ಲಿ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶವನ್ನು ಬಳಸುವುದರ ಮೂಲಕ ಪಾರದರ್ಶಕವಾಗಿ ಉತ್ತಮ ಗುಣಮಟ್ಟದಿಂದ ಅನುಷ್ಠಾನಗೊಳಿಸಲು ಅವಶ್ಯ ಕ್ರಮ ಕೈಗೊಳ್ಳುವುದು.
8. ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಪರಿಸರ ಸಂರಕ್ಷಣೆ ಹಾಗೂ ಜೈವಿಕ ವೈವಿಧ್ಯತೆ ಕಾಪಾಡಲು ಎಲ್ಲಾ ಅವಶ್ಯ ಕ್ರಮಗಳನ್ನು ಕೈಗೊಳ್ಳಲು ಗ್ರಾಮ ಪಂಚಾಯತಿಗಳಿಗೆ ನೆರವಾಗುವುದು.
9. ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ತೆರಿಗೆಗಳು, ದರಗಳು ಮತ್ತು ಶುಲ್ಕಗಳನ್ನು ವಸೂಲು ಮಾಡಲು ಅವುಗಳ ಪರಿಷ್ಕರಣೆ ಮಾಡಲು ಗ್ರಾಮ ಪಂಚಾಯತಿಗಳಿಗೆ ಅವಶ್ಯಕ ನೆರವು ನೀಡುವುದು.
10. ತಾಲ್ಲೂಕು ಪಂಚಾಯತಿ ವ್ಯಾಪ್ತಿಯಲ್ಲಿ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣಕ್ಕೆ ಉತ್ತೇಜನ ನೀಡಲು ಹಾಗೂ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಮತ್ತು ಹಾಜರಾತಿಯನ್ನು ಹೆಚ್ಚಿಸಲು ಎಲ್ಲಾ ಅವಶ್ಯಕ ಕ್ರಮಗಳನ್ನು ಕೈಗೊಳ್ಳುವುದು.
11. ತಾಲ್ಲೂಕು ಪಂಚಾಯತಿ ವ್ಯಾಪ್ತಿಯಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಕಾರ್ಯಕ್ರಮಗಳ ಯಶಸ್ವಿ ಅನುಷ್ಠಾನಕ್ಕೆ ಎಲ್ಲಾ ಅವಶ್ಯಕ ಕ್ರಮಗಳನ್ನು ಕೈಗೊಳ್ಳುವುದು.
12. ತಾಲ್ಲೂಕು ಪಂಚಾಯತಿ ವ್ಯಾಪ್ತಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳ ಸರ್ವಾಂಗೀಣ ಅಭಿವೃದ್ಧಿಗೆ ಎಲ್ಲಾ ಅವಶ್ಯಕ ಕ್ರಮಗಳನ್ನು ಕೈಗೊಳ್ಳುವುದು.
13. ತಾಲ್ಲೂಕು ಪಂಚಾಯತಿ ವ್ಯಾಪ್ತಿಯಲ್ಲಿ ಕೃಷಿ ತೋಟಗಾರಿಕೆ ಹೈನುಗಾರಿಕೆ ಮೀನುಗಾರಿಕೆ ರೇಷ್ಮೆ ಮುಂತಾದ ಚಟುವಟಿಕೆಗಳಿಗೆ ಉತ್ತೇಜನ ನೀಡುವುದು.
14. ಗ್ರಾಮೀಣ ಪರಿಸರ ಜೀವವೈವಿಧ್ಯತೆ ಸಂರಕ್ಷಣೆ ಕೆರೆ ಸಂರಕ್ಷಣೆ ಅಂತರ್ಜಲ ಹೆಚ್ಚಿಸುವ ಯೋಜನೆಗಳ ಅನುಷ್ಠಾನಕ್ಕೆ ಉತ್ತೇಜನ ನೀಡುವುದು.
15. ನವೀಕರಿಸಬಹುದಾದ ಇಂಧನ ತಯಾರಿಕೆಗೆ ಉತ್ತೇಜನ ನೀಡುವುದು.
16. ತಾಲ್ಲೂಕು ಪಂಚಾಯಿತಿ ವ್ಯಾಪ್ತಿಯಲ್ಲಿ ಜನರು ಹಾಗೂ ಜಾನುವಾರುಗಳ ಆರೋಗ್ಯ ಸಂರಕ್ಷಣೆಗೆ ಎಲ್ಲಾ ಅವಶ್ಯ ಕ್ರಮಗಳನ್ನು ಕೈಗೊಳ್ಳುವುದು.
17. ತಾಲ್ಲೂಕು ಪಂಚಾಯಿತಿ ವ್ಯಾಪ್ತಿಯಲ್ಲಿ ಸಹಕಾರ ಸಂಘಗಳ ಬಲವರ್ಧನೆಗೆ ಎಲ್ಲಾ ಅವಶ್ಯ ಕ್ರಮಗಳನ್ನು ಕೈಗೊಳ್ಳುವುದು.

# ಅನುಬಂಧ-III

## ಜಿಲ್ಲಾ ಪಂಚಾಯತಿ

**1. ಜಿಲ್ಲಾ ಪಂಚಾಯತಿಯ ಕಡ್ಡಾಯ ಕರ್ತವ್ಯಗಳು,-**

ಅಧಿನಿಯಮದ ಅನುಸೂಚಿ-III ರಲ್ಲಿನ ವಿಷಯಗಳನ್ನು ಒಳಗೊಂಡಂತೆ, ಜಿಲ್ಲಾ ಪಂಚಾಯತಿಯ ವಶದಲ್ಲಿರುವ ಜಿಲ್ಲಾ ಪಂಚಾಯತಿ ನಿಧಿಯು ಅನುಮತಿಸುವಷ್ಟರ ಮಟ್ಟಿಗೆ ಜಿಲ್ಲಾ ಪಂಚಾಯತಿಯು ಅದರ ಅಧಿಕಾರ ವ್ಯಾಪ್ತಿಯಲ್ಲಿ ಬರುವ ಪ್ರದೇಶದೊಳಗೆ ಈ ಕೆಳಗಿನ ಜವಾಬ್ದಾರಿಗಳನ್ನು ಕಡ್ಡಾಯವಾಗಿ ನಿರ್ವಹಿಸತಕ್ಕದ್ದು.

1) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಸ್ತಾವನೆಯಲ್ಲಿ ತಿಳಿಸಲಾದ ಧ್ಯೇಯಗಳನ್ನು ಈಡೇರಿಸಲು ಅಗತ್ಯ ಕ್ರಮ ಕೈಗೊಳ್ಳುವುದು.
2) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 2ಎ ನಲ್ಲಿ ನಿರ್ದಿಷ್ಟಪಡಿಸಲಾದ ಪಂಚಾಯತಿ ನೀತಿ ನಿರ್ದೇಶಕ ತತ್ವಗಳ ಅನುಷ್ಠಾನಕ್ಕಾಗಿ ಶ್ರಮಿಸುವುದು.
3) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 3ಎ ನಿಂದ 3 ಹೆಚ್ಚ ವರೆಗೆ ನಿರ್ದಿಷ್ಟಪಡಿಸಲಾದ ಗ್ರಾಮ ಸಭೆಯ ಮೂಲ ತತ್ವಗಳನ್ನು ತಪ್ಪದೆ ಪಾಲಿಸಲು ಗ್ರಾಮ ಪಂಚಾಯತಿಗೆ ನೆರವಾಗುವುದು.
4) ಜಿಲ್ಲಾ ಪಂಚಾಯತಿಗೆ ಸರ್ಕಾರದ ವತಿಯಿಂದ ವಿವಿಧ ಲೆಕ್ಕ ಶೀರ್ಷಿಕೆಗಳಲ್ಲಿ ಲಭ್ಯವಾಗುವ ಹಾಗೂ ತಮ್ಮ ಸ್ವಂತ ಸಂಪನ್ಮೂಲದಲ್ಲಿ ಕ್ರೋಢೀಕರಿಸುವ ಅನುದಾನಗಳನ್ನು ಬಳಸಿಕೊಂಡು ಈ ಕೆಳಕಂಡ ಕರ್ತವ್ಯಗಳನ್ನು ನಿರ್ವಹಿಸುವುದು.

1. ಜಿಲ್ಲಾ ಪಂಚಾಯತಿ ಪ್ರದೇಶದಲ್ಲಿ ಸಮರ್ಪಕ ಶುದ್ಧ ಕುಡಿಯುವ ನೀರು ಒದಗಿಸಲು ಅವಶ್ಯ ಕ್ರಮ ಕೈಗೊಳ್ಳಲು ಗ್ರಾಮ ಪಂಚಾಯತಿಗಳಿಗೆ ನೆರವಾಗುವುದು.
2. ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಎಲ್ಲಾ ಕುಟುಂಬಗಳಿಗೂ ವೈಯಕ್ತಿಕ / ಸಾಮೂಹಿಕ ಶೌಚಾಲಯ ಒದಗಿಸುವುದರ ಜೊತೆಗೆ ಶೌಚಾಲಯ ಬಳಸುವ ಪ್ರವೃತ್ತಿಯನ್ನು ಜನರಲ್ಲಿ ಮೂಡಿಸಲು ಗ್ರಾಮ ಪಂಚಾಯತಿಗಳಿಗೆ ನೆರವಾಗುವುದು.
3. ಜಿಲ್ಲಾ ಪಂಚಾಯತಿ ಪ್ರದೇಶದಲ್ಲಿ ಘನ, ದ್ರವ, ತ್ಯಾಜ್ಯ ವಿಲೇವಾರಿ, ಸಂಸ್ಕರಿಸಲು ಹಾಗೂ ಸಂಪನ್ಮೂಲವಾಗಿ ಪರಿವರ್ತಿಸಲು ಎಲ್ಲಾ ಅವಶ್ಯ ಕ್ರಮ ಕೈಗೊಳ್ಳಲು ಗ್ರಾಮ ಪಂಚಾಯತಿಗಳಿಗೆ ನೆರವಾಗುವುದು.
4. ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಆಸ್ತಿಗಳ ಅನಧಿಕೃತ ವಹಿವಾಟುಗಳನ್ನು ತಡೆಗಟ್ಟಲು ಹಾಗೂ ಯೋಜಿತ ರೀತಿಯಲ್ಲಿ ಗ್ರಾಮಗಳ ಬೆಳವಣಿಗೆಗೆ ಇ-ಸ್ವತ್ತು ತಂತ್ರಾಂಶವನ್ನು ಸಮರ್ಪಕವಾಗಿ ಜಾರಿಗೊಳಿಸಲು ಗ್ರಾಮ ಪಂಚಾಯತಿಗಳಿಗೆ ನೆರವಾಗುವುದು.
5. ಜಿಲ್ಲಾ ಪಂಚಾಯತಿ ವ್ಯಾಪ್ತಿಯ ನಾಗರೀಕರಿಗೆ ಅವಶ್ಯವಿರುವ ಸೇವೆಗಳನ್ನು ಸಕಾಲದಲ್ಲಿ ಬಾಪೂಜಿ ಸೇವಾ ಕೇಂದ್ರಗಳ ಮೂಲಕ ಸಮರ್ಪಕವಾಗಿ ಒದಗಿಸಲು ಎಲ್ಲಾ ಅವಶ್ಯ ಕ್ರಮಗಳನ್ನು ಕೈಗೊಳ್ಳಲು ಗ್ರಾಮ ಪಂಚಾಯತಿಗಳಿಗೆ ನೆರವಾಗುವುದು.
6. ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶವನ್ನು ಬಳಸುವುದರ ಮೂಲಕ ಪಾರದರ್ಶಕವಾಗಿ ಉತ್ತಮ ಗುಣಮಟ್ಟದಿಂದ ಅನುಷ್ಠಾನಗೊಳಿಸಲು ಅವಶ್ಯ ಕ್ರಮ ಕೈಗೊಳ್ಳುವುದು.
7. ಜಿಲ್ಲೆ ಪಂಚಾಯತಿ ವ್ಯಾಪ್ತಿಯಲ್ಲಿ ಪರಿಸರ ಸಂರಕ್ಷಣೆ ಹಾಗೂ ಜೈವಿಕ ವೈವಿಧ್ಯತೆ ಕಾಪಾಡಲು ಎಲ್ಲಾ ಅವಶ್ಯ ಕ್ರಮಗಳನ್ನು ಕೈಗೊಳ್ಳಲು ಗ್ರಾಮ ಪಂಚಾಯತಿಗಳಿಗೆ ನೆರವಾಗುವುದು.

8. ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿ ತೆರಿಗೆಗಳು, ದರಗಳು ಮತ್ತು ಶುಲ್ಕಗಳನ್ನು ವಸೂಲು ಮಾಡಲು ಅವುಗಳ ಪರಿಷ್ಕರಣೆ ಮಾಡಲು ಗ್ರಾಮ ಪಂಚಾಯತಿಗಳಿಗೆ ಅವಶ್ಯಕ ನೆರವು ನೀಡುವುದು.
9. ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣಕ್ಕೆ ಉತ್ತೇಜನ ನೀಡಲು ಹಾಗೂ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಮತ್ತು ಹಾಜರಾತಿಯನ್ನು ಹೆಚ್ಚಿಸಲು ಎಲ್ಲಾ ಅವಶ್ಯಕ ಕ್ರಮಗಳನ್ನು ಕೈಗೊಳ್ಳುವುದು.
10. ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿ ಮಹಿಳಾ ಮತ್ತ ಮಕ್ಕಳ ಕಲ್ಯಾಣ ಕಾರ್ಯಕ್ರಮಗಳ ಯಶಸ್ವಿ ಅನುಷ್ಠಾನಕ್ಕೆ ಎಲ್ಲಾ ಅವಶ್ಯಕ ಕ್ರಮಗಳನ್ನು ಕೈಗೊಳ್ಳುವುದು.
11. ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಗಳಿದ ವರ್ಗಗಳ ಸರ್ವಾಂಗೀಣ ಅಭಿವೃದ್ಧಿಗೆ ಎಲ್ಲಾ ಅವಶ್ಯಕ ಕ್ರಮಗಳನ್ನು ಕೈಗೊಳ್ಳುವುದು.
12. ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿ ಕೃಷಿ, ತೋಟಗಾರಿಕೆ, ಹೈನುಗಾರಿಕೆ, ಮೀನುಗಾರಿಕೆ, ರೇಷ್ಮೆ ಮುಂತಾದ ಚಟುವಟಿಕೆಗಳಿಗೆ ಉತ್ತೇಜನ ನೀಡುವುದು.
13. ಗ್ರಾಮೀಣ ಪರಿಸರ, ಜೀವವೈವಿಧ್ಯತೆ ಸಂರಕ್ಷಣೆ, ಕೆರೆ ಸಂರಂಕ್ಷಣೆ, ಅಂತರ್ಜಲ ಹೆಚ್ಚಿಸುವ ಯೋಜನೆಗಳ ಅನುಷ್ಠಾನಕ್ಕೆ ಉತ್ತೇಜನ ನೀಡುವುದು.
14. ನವೀಕರಿಸಬಹುದಾದ ಇಂಧನ ತಯಾರಿಕೆಗೆ ಉತ್ತೇಜನ ನೀಡುವುದು.
15. ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ಜನರು ಹಾಗೂ ಜಾನುವಾರುಗಳ ಆರೋಗ್ಯ ಸಂರಕ್ಷಣೆಗೆ ಎಲ್ಲಾ ಅವಶ್ಯ ಕ್ರಮಗಳನ್ನು ಕೈಗೊಳ್ಳುವುದು.
16. ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿ ಸಹಕಾರ ಸಂಘಗಳ ಬಲವರ್ಧನೆಗೆ ಎಲ್ಲಾ ಅವಶ್ಯ ಕ್ರಮಗಳನ್ನು ಕೈಗೊಳ್ಳುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ
6/1/18
**(ಮುಬಾರಕ್ ಅಹ್ಮದ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

6/1/18
ಉಪ ನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ,

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, – ಈ ಅಧಿಸೂಚನೆಯನ್ನು ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ, 100 ಪ್ರತಿಗಳನ್ನು ಉಪನಿರ್ದೇಶಕರು ಹಾಗೂ ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಗೆ ಒದಗಿಸಲು ಕೋರಿದೆ.

**ಪ್ರತಿ:**

1. ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ಎಲ್ಲಾ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು.
3. ಎಲ್ಲಾ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಯವರಿಗೆ.
6. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
7. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.